ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

---

ವಿಷಯ: ದಿನಾಂಕ: 01.07.2021 ರಿಂದ ಅನ್ವಯಿಸುವಂತೆ ನೌಕರರ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ.

***

<u>ಓದಲಾಗಿದೆ:-</u>

1. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿನಿ ನೌಕರರ ಸಂಘ (ನೋ.ಸ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
2. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 1.4.2017 ರಿಂದ ಜಾರಿಗೆ ಬರುವಂತೆ ನಿಗಮದ ನೌಕರರಿಗೆ ಮತ್ತು ಅಧಿಕಾರಿಗಳಿಗೆ ಸಂಬಂಧಪಟ್ಟಂತೆ ಹೊರಡಿಸಲಾದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ಮತ್ತು ಕವಿಪ್ರನಿನಿ/ಬಿ16/69517/2017-18 ದಿನಾಂಕ: 09.03.2018.
3. ದಿನಾಂಕ: 01.07.2017 ರಿಂದ ಅನ್ವಯವಾಗುವಂತೆ ಮಂಜೂರು ಮಾಡಲಾಗಿರುವ ಶೇಕಡ 45.25 ರಷ್ಟು ತುಟ್ಟಿಭತ್ಯೆಯನ್ನು 'ಡಿಯರ್‌ನೆಸ್ ಪೇ' ಎಂದು ಪರಿಗಣಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610/2003-04 ದಿನಾಂಕ: 21.06.2018.
4. ದಿನಾಂಕ: 01.07.2021 ರಿಂದ ಜಾರಿಗೆ ಬರುವಂತೆ, ರಾಜ್ಯ ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆಯ ದರವನ್ನು ಪರಿಷ್ಕರಿಸಿ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಆಇ 30 ಎಸ್‌ಆರ್‌ಪಿ 2021 ದಿನಾಂಕ: 27.10.2021.
5. ನಿಗಮದ, ದಿನಾಂಕ: 06.11.2021 ರ ಟಿಪ್ಪಣಿ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610(Vol.III)/2003-04, ಬೆಂಗಳೂರು, ದಿನಾಂಕ: 8 NOV 2021**

1. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ತನ್ನ ನೌಕರರಿಗೆ ದಿನಾಂಕ 1ನೇ ಜುಲೈ 2021 ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇ.21.50 ರಿಂದ ಶೇ.24.50 ಕ್ಕೆ ಹೆಚ್ಚಿಸಿ ಮಂಜೂರು ಮಾಡಿದೆ.

2. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಜುಲೈ-2021 ರಿಂದ ಮುಂದಕ್ಕೆ ಮತ್ತು ಮುಂದೆ ಮರು ಆದೇಶ ಹೊರಡಿಸುವವರೆಗೆ ನಗದಾಗಿ ಪಾವತಿ ಮಾಡುವುದು.

3. ಕಾಲಿಕ ವೇತನ ಶ್ರೇಣಿಯಲ್ಲಿರುವ ಪೂರ್ಣಾವಧಿ ನೌಕರರಿಗೆ ಈ ಆದೇಶ ಅನ್ವಯಿಸುತ್ತದೆ. ಆದರೆ ದಿನಗೂಲಿಯಾಗಿ ಕೆಲಸ ಮಾಡುತ್ತಿರುವ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರಿಗೆ ಈ ಆದೇಶ ಅನ್ವಯಿಸುವುದಿಲ್ಲ.

4. ಈ ಆದೇಶದ ಉದ್ದೇಶಗಳಿಗಾಗಿ ಮೂಲ ವೇತನ ಎಂದರೆ ನೌಕರರು ಧಾರಣ ಮಾಡಿರುವ ಹುದ್ದೆಗಳಿಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುವ ಮೂಲ ವೇತನ, ಡಿಯರ್‌ನೆಸ್ ಪೇ ಮತ್ತು ಈ ಕೆಳಗೆ ತಿಳಿಸಿರುವ ಇತರೆ ಸೌಲಭ್ಯಗಳನ್ನು ಸಹ ಒಳಗೊಂಡಿರುತ್ತದೆ

   i) ನಿಗಮದ ನಿಯಮಗಳಿಗನುಸಾರವಾಗಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ನೀಡಲಾಗಿರುವ

1 2/11/2021



ii) ನಿಗಮದ ನಿಯಮಗಳಿಗನುಸಾರವಾಗಿ ನೀಡಲಾಗಿರುವ ವೈಯಕ್ತಿಕ ವೇತನ (Personal Pay)

5. ಮೂಲ ವೇತನಕ್ಕೆ ನಿರೂಪಿಸಿರುವುದನ್ನು ಹೊರತುಪಡಿಸಿ, ಇತರೆ ಯಾವುದೇ ಉಪಲಬ್ಧಗಳು ಸೇರತಕ್ಕದ್ದಲ್ಲ. ತುಟ್ಟಿಭತ್ಯೆಯ ಗಣನೆಗೆ ವಿಶೇಷ ವೇತನ, ಪ್ರಭಾರ ಭತ್ಯೆ ಮತ್ತು ಇತರೆ ಭತ್ಯೆಗಳನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ.

6. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಲು 50 ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಾಂಕಗೊಳಿಸತಕ್ಕದ್ದು ಮತ್ತು 50 ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

7. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ಕಾಣಿಸುವುದನ್ನು ಮುಂದುವರಿಸಲಾಗುವುದು ಹಾಗೂ ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನವೆಂದು ಪರಿಗಣಿಸಲಾಗುವುದಿಲ್ಲ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/ Cys-1196 ದಿನಾಂಕ: 15 NOV 2021

ಅಧಿಕಾರಿ/ನೌಕರರಿಗೆ ದಿನಾಂಕ 1ನೇ ಜುಲೈ 2021ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇ.21.50 ರಿಂದ ಶೇ.24.50ಕ್ಕೆ ಹೆಚ್ಚಿಸಿ ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರು ಹೊರಡಿಸಿರುವ ಆದೇಶ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/3610(Vol.III)/2003-04 ದಿನಾಂಕ: 08.11.2021ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.